UNIVERSITY LIBRARY
Newspaper's Agri Clippings
For more information visit University Library Website
Web - uasbagrilibindia.org
E-mail- librarian@uasbangalore.edu.in
Saturday
17-10-2026
Part-B

# ವಿಶ್ವ ಆಹಾರ ದಿನಾಚರಣೆ



**ಬೆಂಗಳೂರು:** ಆಹಾರವು ಪ್ರತಿಯೊಬ್ಬ ಮನುಷ್ಯನ ಮೂಲಭೂತ ಅವಶ್ಯಕತೆಯಾಗಿದ್ದು, ಆಹಾರ ಉತ್ಪಾದನೆ, ಆಹಾರ ಭದ್ರತೆ ಮತ್ತು ಪೌಷ್ಟಿಕತೆಯ ಮಹತ್ವವನ್ನು ಪ್ರತಿಯೊಬ್ಬರೂ ಅರಿಯಬೇಕು ಎಂದು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿ ಡಾ. ಎಸ್.ವಿ. ಸುರೇಶ್ ಹೇಳಿದರು.

ಕೃಷಿವಿಶ್ವವಿದ್ಯಾನಿಲಯ ಜಿಕೆವಿಕೆಯಲ್ಲಿ ಆಯೋಜಿಸಲಾಗಿದ್ದ ವಿಶ್ವ ಆಹಾರ ದಿನಾಚರಣೆ 2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉತ್ಪಾದಿಸಿದ ಆಹಾರವನ್ನು ಸಮರ್ಪಕವಾಗಿ ಸಂರಕ್ಷಿಸುವುದು ಹಾಗೂ ಆಹಾರ ವ್ಯರ್ಥವಾಗದಂತೆ ತಡೆಯುವುದು ಸಮುದಾಯದ ಹೊಣೆಗಾರಿಕೆಯಾಗಿದೆ. ಅಕ್ಕಿ ಮತ್ತು ಗೋಧಿಯ ಮೇಲಿನ ಹೆಚ್ಚಿನ ಅವಲಂಬನೆಯನ್ನು ಕಡಿಮೆ ಮಾಡಿ, ಸಿರಿಧಾನ್ಯಗಳು, ಬೇಳೆಕಾಳುಗಳು, ಹಣ್ಣುಗಳು ಮತ್ತು ತರಕಾರಿಗಳನ್ನು ದಿನನಿತ್ಯದ ಆಹಾರ ಪದ್ಧತಿಯಲ್ಲಿ ಸೇರಿಸಿಕೊಳ್ಳಬೇಕಿದೆ. ಸಿರಿಧಾನ್ಯ ಮತ್ತು ಹಣ್ಣುಗಳ ಮೌಲ್ಯವರ್ಧನೆಗೆ ಆದ್ಯತೆ ನೀಡುವುದರಿಂದ ರೈತರಿಗೆ ಹೆಚ್ಚಿನ ಆದಾಯ ದೊರೆಯುವುದಲ್ಲದೆ, ಕೃಷಿ ಆಧಾರಿತ ಉದ್ಯಮಗಳು ಹಾಗೂ ಹೊಸ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ತಿಳಿಸಿದರು.

ಸಾಂಪ್ರದಾಯಿಕ ಆಹಾರ ಪದ್ಧತಿಯಲ್ಲಿರುವ ಪೌಷ್ಟಿಕ ಜ್ಞಾನವನ್ನು ಆಧುನಿಕ ವಿಜ್ಞಾನ ಹಾಗೂ ತಂತ್ರಜ್ಞಾನದೊಂದಿಗೆ ಸಂಯೋಜಿಸಿ, ವಿಟಮಿನ್‌ಗಳು, ಪ್ರೋಟೀನ್ ಮತ್ತು ಖನಿಜಾಂಶಗಳ ಕೊರತೆಯನ್ನು ನಿವಾರಿಸಲು ವೈವಿಧ್ಯಮಯ ಸಮತೋಲಿತ ಆಹಾರ ಸೇವನೆ ಅತಿ ಅಗತ್ಯವಾಗಿದೆ ಎಂದು ವಿವರಿಸಿದರು. ಒಂದೇ ರೀತಿಯ ಆಹಾರಕ್ಕೆ ಸೀಮಿತವಾಗದೆ ವೈವಿಧ್ಯಮಯ ಆಹಾರ ಸೇವನೆಯಿಂದ ಸಂಪೂರ್ಣ ಆರೋಗ್ಯ ಸಾಧಿಸಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

Hosadiganta pg 10